ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 23/12/20

## ಬಿಎಸ್‌ವೈಗೆ ಮತ್ತೆ ಸಂಕಟ

**ಬೆಂಗಳೂರು:** ಅಕ್ರಮ ಡಿ-ನೋಟಿಫಿಕೇಷನ್ ಪ್ರಕರಣದಲ್ಲಿ ಸಿಎಂ ಯಡಿಯೂರಪ್ಪ ಅವರಿಗೆ ಮತ್ತೆ ಸಂಕಷ್ಟ ಎದುರಾಗಿದೆ. ತಮ್ಮ ವಿರುದ್ಧ ಲೋಕಾಯುಕ್ತ ಪೊಲೀಸರು 2015ರಲ್ಲಿ ದಾಖಲಿಸಿದ್ದ ಎಫ್‌ಐಆರ್ ಹಾಗೂ ಲೋಕಾಯುಕ್ತ ಕೋರ್ಟ್ ವಿಚಾರಣೆಯನ್ನು ರದ್ದುಪಡಿಸಲು ಕೋರಿ ಅವರು ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಲು ಹೈಕೋರ್ಟ್ ನಿರಾಕರಿಸಿದೆ. ಬೆಳ್ಳಂದೂರು ಹಾಗೂ ದೇವರಬೀಸನಹಳ್ಳಿ ಡಿ-ನೋಟಿಫಿಕೇಷನ್ ಮಾಡಿದ ಆರೋಪ ಸಂಬಂಧ ಬಿಎಸ್‌ವೈ ಸಲ್ಲಿಸಿದ್ದ ಅರ್ಜಿಯನ್ನು ಕೋರ್ಟ್ ತಿರಸ್ಕರಿಸಿದೆ.



## ಲೋಕಾಯುಕ್ತ ಕೋರ್ಟ್ ವಿಚಾರಣೆ ರದ್ದುಗೊಳಿಸಲು ಹೈಕೋರ್ಟ್ ನಕಾರ

# ಸಿಎಂ ಯಡಿಯೂರಪ್ಪಗೆ ಮತ್ತೆ ಸಂಕಷ್ಟ

■ **ವಿಕ ಸುದ್ದಿಲೋಕ** ಬೆಂಗಳೂರು 23/12/20

ಅಕ್ರಮ ಡಿ-ನೋಟಿಫಿಕೇಷನ್ ಪ್ರಕರಣದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಮತ್ತೆ ಸಂಕಷ್ಟ ಎದುರಾಗಿದೆ.

ಲೋಕಾಯುಕ್ತ ಪೊಲೀಸರು 2015ರಲ್ಲಿ ದಾಖಲಿಸಿದ್ದ ಎಫ್ ಐಆರ್ ಹಾಗೂ ಲೋಕಾಯುಕ್ತ ಕೋರ್ಟ್ ವಿಚಾರಣೆ ರದ್ದುಪಡಿಸಲು ಕೋರಿದ್ದ ಅರ್ಜಿಯನ್ನು ಪುರಸ್ಕರಿಸಲು ಹೈಕೋರ್ಟ್ ನಿರಾಕರಿಸಿದೆ.

ಬೆಳ್ಳಂದೂರು ಹಾಗೂ ದೇವರಬೀಸನಹಳ್ಳಿ ಡಿ-ನೋಟಿಫಿಕೇಷನ್ ಆರೋಪ ಸಂಬಂಧ ಸಿಎಂ ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿಯನ್ನು ನ್ಯಾ. ಜಾನ್ ಮೈಕೆಲ್ ಕುನ್ಹಾ ಅವರಿದ್ದ ಏಕ ಸದಸ್ಯಪೀಠ ಮಂಗಳವಾರ ತಿರಸ್ಕರಿಸಿದೆ.

ಲೋಕಾಯುಕ್ತ ಕೋರ್ಟ್ 2015ರ ಫೆ.18ರಂದು ಆದೇಶಿಸಿದ್ದರೂ 2019ರವರೆಗೂ ಪ್ರಕರಣದಲ್ಲಿನ ಯಡಿಯೂರಪ್ಪ ವಿರುದ್ಧದ ಆರೋಪಗಳ ಕುರಿತು ಸಮರ್ಪಕ ತನಿಖೆ ನಡೆಸದ ಲೋಕಾಯುಕ್ತ ಪೊಲೀಸರ ಕಾರ್ಯವೈಖರಿಯನ್ನು ನ್ಯಾಯಾಲಯ ತೀವ್ರವಾಗಿ ಖಂಡಿಸಿ, ತನಿಖೆಯ ಮೇಲ್ವಿಚಾರಣೆ ನಡೆಸಲು ಲೋಕಾಯುಕ್ತ ಕೋರ್ಟ್‌ಗೆ ನಿರ್ದೇಶಿಸಿದೆ.

''ನಾಲ್ಕು ವರ್ಷದಲ್ಲಿ ಪ್ರಕರಣದ ತನಿಖೆ ನಡೆಸುವುದಕ್ಕೆ ಯಾವುದೇ ನ್ಯಾಯಾಲಯದಿಂದಲೂ ತಡೆಯಾಜ್ಞೆ ಇರಲಿಲ್ಲ. ಆದರೂ



**ಅಕ್ರಮ ಡಿನೋಟಿಫಿಕೇಷನ್ ಪ್ರಕರಣ**

ಲೋಕಾಯುಕ್ತ ಪೊಲೀಸರು ಯಡಿಯೂರಪ್ಪ ವಿರುದ್ಧ ತನಿಖೆ ನಡೆಸಿಲ್ಲ. ತನಿಖೆ ನಡೆಸದಿರುವುದಕ್ಕೆ ಮತ್ತು ಅರ್ಜಿ ಕುರಿತು ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ ಆಕ್ಷೇಪಣೆಯನ್ನು ಒಪ್ಪುವಂತಹದಲ್ಲ. ಉನ್ನತ ಹುದ್ದೆಯಲ್ಲಿರುವವರ ವಿರುದ್ಧದ ಪ್ರಕರಣಗಳ ತನಿಖೆ ಪ್ರಗತಿ ಕಾಣದಿದ್ದರೆ ಕಾನೂನು ಮತ್ತು ನ್ಯಾಯಾಂಗ ವ್ಯವಸ್ಥೆ ಮೇಲಿನ ನಂಬಿಕೆ-ವಿಶ್ವಾಸವನ್ನು ಸಾರ್ವಜನಿಕರು ಕಳೆದುಕೊಳ್ಳುವ ಪರಿಸ್ಥಿತಿ ಉದ್ಭವಿಸುತ್ತದೆ'' ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ದೂರುದಾರ ವಾಸುದೇವರೆಡ್ಡಿ ಪರ ವಕೀಲ ಕೆ.ವಿ.ಧನಂಜಯ, ''ಐಟಿ ಕಾರಿಡಾರ್ ಡಿನೋಟಿಫಿಕೇಷನ್ ಕುರಿತ ಆರ್.ವಿ. ದೇಶಪಾಂಡೆ ವಿರುದ್ಧದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ. ಅದನ್ನು ಪರಿಗಣಿಸಿ ಯಡಿಯೂರಪ್ಪ ವಿರುದ್ಧದ ಎಫ್‌ಐಆರ್‌ಗೆ 2019ರ ಏಪ್ರಿಲ್ 2ರಂದು ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ವಾಸ್ತವಾಗಿ ಯಡಿಯೂರಪ್ಪ ಪ್ರಕರಣಕ್ಕೂ ದೇಶಪಾಂಡೆ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ. ದೂರು ದಾಖಲಿಸಲು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆಯುವುದು ಬೇಕಿಲ್ಲ. ಹೀಗಾಗಿ, ಯಡಿಯೂರಪ್ಪ ಅರ್ಜಿ ವಜಾಗೊಳಿಸಬೇಕು,'' ಎಂದು ಕೋರಿದ್ದರು.

**ಪ್ರಕರಣದ ಹಿನ್ನೆಲೆ**

**2000-2001ನೇ ಸಾಲಿನಲ್ಲಿ ನಗರದ ವೈಟ್ ಫೀಲ್ಡ್ ಮತ್ತು ಎಲೆಕ್ಟ್ರಾನಿಕ್ ಸಿಟಿಯಲ್ಲಿ ಸುಮಾರು 500 ಎಕರೆಯನ್ನು ಐಟಿ ಕಾರಿಡಾರ್ ಆಗಿ ರಾಜ್ಯ ಸರಕಾರ ಘೋಷಿಸಿತ್ತು. ಮಾರತ್‌ಹಳ್ಳಿ, ಬೆಳ್ಳಂದೂರು, ಸರ್ಜಾಪುರ, ದೇವರ ಬೀಸನಹಳ್ಳಿ, ಕಾಡು ಬೀಸನಹಳ್ಳಿ, ಕರಿಯಮ್ಮನ ಅಗ್ರಹಾರ ಸೇರಿ ಸುತ್ತಮುತ್ತಲಿನ ಗ್ರಾಮಗಳಲ್ಲಿನ 434 ಎಕರೆ ಪ್ರದೇಶ ಸ್ವಾಧೀನಕ್ಕೆ ಕೆಐಎಡಿಬಿ ಅಧಿಸೂಚನೆ ಹೊರಡಿಸಿತ್ತು. ಬಿ.ಎಸ್.ಯಡಿಯೂರಪ್ಪ, ಕೆಐಎಡಿಬಿ ವಶಪಡಿಸಿಕೊಂಡಿದ್ದ ದೇವರಬೀಸನಹಳ್ಳಿಯ ಸರ್ವೆ ನಂ 49ರ 4.30 ಎಕರೆ, ಬೆಳ್ಳಂದೂರು ಗ್ರಾಮದ ಸರ್ವೆ ನಂ 46 / 1ರ 1.13 ಎಕರೆ, ಸರ್ವೆ ನಂ 18ರ 1.10 ಎಕರೆ, ಸರ್ವೇ ನಂ 10ರ 33 ಗುಂಟೆ ಜಾಗವನ್ನು ಡಿನೋಟಿಫಿಕೇಷನ್ ಮಾಡಲು ಅಕ್ರಮವಾಗಿ ಆದೇಶಿಸಿದ್ದಾರೆ ಎಂದು ಆರೋಪಿಸಿ ವಾಸುದೇವರೆಡ್ಡಿ ಎಂಬುವರು 2012ರ ಜು.10ರಂದು ಲೋಕಾಯುಕ್ತ ವಿಶೇಷ ನ್ಯಾಯಾಲಯಕ್ಕೆ ಖಾಸಗಿ ದೂರು ದಾಖಲಿಸಿದ್ದರು.**

**ಯಡಿಯೂರಪ್ಪ ಅವರನ್ನು ಎರಡನೇ ಆರೋಪಿಯನ್ನಾಗಿ ಮಾಡಿದ್ದರು. ಯಡಿಯೂರಪ್ಪ ಅವರು 2019ರ ಜ.25ರಂದು ಹೈಕೋರ್ಟ್‌ಗೆ ತಕರಾರು ಅರ್ಜಿ ಸಲ್ಲಿಸಿ, ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆಯದೇ ತಮ್ಮ ವಿರುದ್ಧ ದೂರು ದಾಖಲಿಸಲಾಗಿರುವುದು ಕಾನೂನುಬಾಹಿರ ಕ್ರಮವಾಗಿದ್ದು, ಪ್ರಕರಣ ರದ್ದುಪಡಿಸುವಂತೆ ಕೋರಿದ್ದರು. 2019ರ ಏ.2ರಂದು ತನಿಖೆಗೆ ತಡೆಯಾಜ್ಞೆ ನೀಡಿತ್ತು.**